All India Radio: Bangalore
National Bulletin In Kannada
22.02.2026  7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<>><><*><><<>

ಮುಖ್ಯಾಂಶಗಳು

೧.  ಉತ್ತರ ಪ್ರದೇಶದ ಮೀರತ್‌ಗೆ ಇಂದು ಪ್ರಧಾನಿ ನರೇಂದ್ರ ಮೋದಿ ಭೇಟಿ; ೧೨ ಸಾವಿರ ೯೩೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ

೨.  ಮನ್ ಕಿ ಬಾತ್; ಭಾರತೀಯರನ್ನುದ್ದೇಶಿಸಿ ಇಂದು ಪ್ರಧಾನಿ ಮನದ ಮಾತು

೩.  ಔಷಧ, ವೈದ್ಯಕೀಯ ಉತ್ಪನ್ನಗಳ ನಿಯಂತ್ರಣ ಕ್ಷೇತ್ರದಲ್ಲಿ ಭಾರತ-ಬ್ರೆಜಿಲ್ ತಿಳುವಳಿಕೆ ಒಪ್ಪಂದ ವಿನಿಮಯ

೪.  ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್; ಮಳೆಯಿಂದಾಗಿ ನ್ಯೂಜಿಲೆಂಡ್-ಪಾಕಿಸ್ತಾನ ಸೂಪರ್ ೮ರ ಹಂತದ ಪಂದ್ಯ ರದ್ದು

<>><><*><><<>

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಉತ್ತರ ಪ್ರದೇಶದ ಮೀರತ್‌ಗೆ ಭೇಟಿ ನೀಡಲಿದ್ದಾರೆ. ಶತಾಬ್ದಿ ನಗರ ನಮೋ ಭಾರತ್ ನಿಲ್ದಾಣದಲ್ಲಿ ಮೀರತ್ ಮೆಟ್ರೋ ಮತ್ತು ನಮೋ ಭಾರತ್ ರೈಲಿಗೆ ಪ್ರಧಾನಿ ಚಾಲನೆ ನೀಡಲಿದ್ದಾರೆ. ಇದೇ ವೇಳೆ ಅವರು ಮೀರತ್ ದಕ್ಷಿಣ ನಿಲ್ದಾಣದವರೆಗೆ ಮೆಟ್ರೋ ರೈಲಿನಲ್ಲಿ ಪ್ರಯಾಣಿಸಲಿದ್ದಾರೆ.  ತಮ್ಮ ಭೇಟಿಯ ಸಮಯದಲ್ಲಿ, ಪ್ರಧಾನಿ ಅವರು ಸುಮಾರು ೧೨ ಸಾವಿರ ೯೩೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ಪ್ರಧಾನ ಮಂತ್ರಿಗಳು ಸಂಪೂರ್ಣ ೮೨ ಕಿಲೋಮೀಟರ್ ದೆಹಲಿ-ಮೀರತ್ ನಮೋ ಭಾರತ್ ಕಾರಿಡಾರ್ ಮತ್ತು ದೇಶದ ಮೊದಲ ನಮೋ ಭಾರತ್ ಪ್ರಾದೇಶಿಕ ಕ್ಷಿಪ್ರ ಸಾರಿಗೆ ವ್ಯವಸ್ಥೆಯ ಉಳಿದ ವಿಭಾಗಗಳನ್ನು ಉದ್ಘಾಟಿಸಲಿದ್ದಾರೆ.  ಈ ಯೋಜನೆಗಳು ನಗರ ಚಲನಶೀಲತೆಯನ್ನು ಪರಿವರ್ತಿಸುವ ಮತ್ತು ನಾಗರಿಕರ ಜೀವನ ಸುಲಭತೆಯನ್ನು ಸುಧಾರಿಸುವ ತಡೆರಹಿತ, ಪರಿಣಾಮಕಾರಿ, ಆಧುನಿಕ ಮತ್ತು ಸುಸ್ಥಿರ ಸಾರ್ವಜನಿಕ ಸಾರಿಗೆ ವ್ಯವಸ್ಥೆಗಳನ್ನು ಖಚಿತಪಡಿಸಿಕೊಳ್ಳುವ ಪ್ರಧಾನಿ ನರೇಂದ್ರ ಮೋದಿಯವರ ದೃಷ್ಟಿಕೋನಕ್ಕೆ ಮತ್ತಷ್ಟು ಉತ್ತೇಜನ ನೀಡುತ್ತವೆ.

<>><><*><><<>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ ’ಮನ್ ಕಿ ಬಾತ್’ನಲ್ಲಿ ಇಂದು ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ಮತ್ತು ವಿದೇಶಗಳ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೧ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಇದನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮವನ್ನು ಪ್ರಸಾರ ಮಾಡಲಾಗುವುದು.

<>><><*><><<>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದು ತಮಿಳುನಾಡಿಗೆ ಭೇಟಿ ನೀಡಲಿದ್ದಾರೆ. ಈ ಭೇಟಿಯ ಸಮಯದಲ್ಲಿ, ಉಪರಾಷ್ಟ್ರಪತಿಗಳು ಮಧುರೈನ ವಂಡಿಯೂರಿನಲ್ಲಿ ತಿರು ವಿ.ಒ.ಚಿದಂಬರಂ ಪಿಳ್ಳೈ ಅವರ ಪ್ರತಿಮೆಗೆ ಶಿಲಾನ್ಯಾಸ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ನಂತರ, ಅವರು ಶಿವಗಂಗೆಯ ತಿರುಕೋಷ್ಟಿಯೂರ್ ಸೌಮ್ಯ ನಾರಾಯಣ ಪೆರುಮಾಳ್ ದೇವಸ್ಥಾನ ಮತ್ತು ರಾಣಿ ವೇಲು ನಾಚಿಯಾರ್ ಅರಮನೆಗೆ ಭೇಟಿ ನೀಡಲಿದ್ದಾರೆ.

<>><><*><><<>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ನವದೆಹಲಿಯಲ್ಲಿ ’ಅಟಲ್ ಬಿಹಾರಿ ವಾಜಪೇಯಿ: ದಿ ಎಟರ್ನಲ್ ಸ್ಟೇಟ್ಸ್‌ಮನ್’ ಎಂಬ ಶೀರ್ಷಿಕೆಯ ಕಾಫಿ ಟೇಬಲ್ ಪುಸ್ತಕವನ್ನು ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಉಪರಾಷ್ಟ್ರಪತಿಗಳು, ಈ ಪುಸ್ತಕವು ಭಾರತ ರತ್ನ ಅಟಲ್ ಬಿಹಾರಿ ವಾಜಪೇಯಿ ಅವರಿಗೆ ಸೂಕ್ತವಾದ ಗೌರವವಾಗಿದೆ. ಅವರ ಜೀವನ ಮತ್ತು ಪರಂಪರೆ ರಾಷ್ಟ್ರಕ್ಕೆ ಸ್ಫೂರ್ತಿ ನೀಡುತ್ತಲೇ ಇದೆ ಎಂದು ಹೇಳಿದರು. ಸಂಸದೀಯ ಸದಸ್ಯರಿಂದ ಪ್ರಧಾನಿಯಾಗುವ ವಾಜಪೇಯಿ ಅವರ ಪ್ರಯಾಣವು ಭಾರತೀಯ ಪ್ರಜಾಪ್ರಭುತ್ವದ ಬಲವನ್ನು ಪ್ರತಿಬಿಂಬಿಸುತ್ತದೆ. ವಾಜಪೇಯಿ ಅವರ ಅವಧಿಯಲ್ಲಿ ಪೋಖ್ರಾನ್ ಪರಮಾಣು ಪರೀಕ್ಷೆಗಳು ಮತ್ತು ದೆಹಲಿ ಮೆಟ್ರೋದಂತಹ ದೂರದೃಷ್ಟಿಯ ಮೂಲಸೌಕರ್ಯ ಉಪಕ್ರಮಗಳನ್ನು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಸ್ಮರಿಸಿದರು.

<>><><*><><<>

ಔಷಧ ಮತ್ತು ವೈದ್ಯಕೀಯ ಉತ್ಪನ್ನಗಳ ನಿಯಂತ್ರಣ ಕ್ಷೇತ್ರದಲ್ಲಿ ದ್ವಿಪಕ್ಷೀಯ ಸಹಕಾರವನ್ನು ಬಲಪಡಿಸಲು ಭಾರತ ಮತ್ತು ಬ್ರೆಜಿಲ್ ತಿಳುವಳಿಕೆ ಒಪ್ಪಂದ ವಿನಿಮಯ ಮಾಡಿಕೊಂಡಿವೆ. ನಿಯಂತ್ರಕ ಅಭ್ಯಾಸಗಳಲ್ಲಿ ಒಮ್ಮುಖವನ್ನು ಉತ್ತೇಜಿಸಲು, ನಿಯಂತ್ರಕ ವ್ಯವಸ್ಥೆಗಳ ಪರಸ್ಪರ ತಿಳುವಳಿಕೆಯನ್ನು ಹೆಚ್ಚಿಸಲು ಮತ್ತು ವೈದ್ಯಕೀಯ ಉತ್ಪನ್ನಗಳ ಪರಿಣಾಮಕಾರಿ ಮತ್ತು ಸಂಘಟಿತ ಮೇಲ್ವಿಚಾರಣೆಯನ್ನು ಸುಗಮಗೊಳಿಸಲು ಭಾರತದ ಕೇಂದ್ರ ಔಷಧ ಗುಣಮಟ್ಟ ನಿಯಂತ್ರಣ ಸಂಸ್ಥೆ ಮತ್ತು ಬ್ರೆಜಿಲ್ ಆರೋಗ್ಯ ನಿಯಂತ್ರಣ ಸಂಸ್ಥೆ ನಡುವೆ ಈ ಒಪ್ಪಂದವನ್ನು ವಿನಿಮಯ ಮಾಡಿಕೊಳ್ಳಲಾಗಿದೆ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ತಿಳಿಸಿದೆ. ಬ್ರೆಜಿಲ್‌ನಲ್ಲಿರುವ ಭಾರತೀಯ ರಾಯಭಾರಿ ದಿನೇಶ್ ಭಾಟಿಯಾ ಮತ್ತು ಂಓಗಿISಂ ನಿರ್ದೇಶಕ-ಅಧ್ಯಕ್ಷ ಲಿಯಾಂಡ್ರೊ ಸಫಾಟ್ಲೆ ಅವರು ನವದೆಹಲಿಯಲ್ಲಿ ನಿನ್ನೆ ಪ್ರಧಾನಿ ನರೇಂದ್ರ ಮೋದಿ ಮತ್ತು ಬ್ರೆಜಿಲ್ ಅಧ್ಯಕ್ಷ ಲೂಯಿಜ್ ಇನಾಸಿಯೊ ಲುಲಾ ಡ ಸಿಲ್ವಾ ಅವರ ಸಮ್ಮುಖದಲ್ಲಿ ಒಪ್ಪಂದವನ್ನು ವಿನಿಮಯ ಮಾಡಿಕೊಂಡರು. ಒಪ್ಪಂದದ ವಿನಿಮಯವು ತಮ್ಮ ಜನಸಂಖ್ಯೆಗೆ ಸುರಕ್ಷಿತ, ಪರಿಣಾಮಕಾರಿ ಮತ್ತು ಗುಣಮಟ್ಟ-ಖಚಿತ ಔಷಧಗಳು ಮತ್ತು ವೈದ್ಯಕೀಯ ಉತ್ಪನ್ನಗಳ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ಭಾರತ ಮತ್ತು ಬ್ರೆಜಿಲ್‌ನ ಹಂಚಿಕೆಯ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಸಚಿವಾಲಯ ಹೇಳಿದೆ.

<>><><*><><<>

ಬ್ರೆಜಿಲ್ ಅಧ್ಯಕ್ಷ ಲೂಯಿಜ್ ಇನಾಸಿಯೊ ಲುಲಾ ಡ ಸಿಲ್ವಾ ಅವರ ಭೇಟಿ, ಭಾರತ ಮತ್ತು ಬ್ರೆಜಿಲ್ ನಡುವಿನ ಸಂಬಂಧದಲ್ಲಿ ಒಂದು ನಿರ್ಣಾಯಕ ಕ್ಷಣವಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ಭಾರತ-ಬ್ರೆಜಿಲ್ ವ್ಯಾಪಾರ ವೇದಿಕೆಯ ಸಮಗ್ರ ಅಧಿವೇಶನವನ್ನುದ್ದೇಶಿಸಿ ಮಾತನಾಡಿದ ಸಚಿವರು, ಉಭಯ ದೇಶಗಳ ಸಂಬಂಧವು ಪ್ರಜಾಪ್ರಭುತ್ವ, ವೈವಿಧ್ಯತೆ ಮತ್ತು ಅಭಿವೃದ್ಧಿಗಾಗಿ ಹಂಚಿಕೆಯ ಆಕಾಂಕ್ಷೆಗಳ ಅಡಿಪಾಯದ ಮೇಲೆ ನಿರ್ಮಿಸಲಾಗಿದೆ ಎಂದು ಹೇಳಿದರು. ಉಭಯ ದೇಶಗಳ ನಡುವೆ ರಕ್ಷಣೆ, ಇಂಧನ, ಕೃಷಿ ಮತ್ತು ಕೃಷಿ ರಾಸಾಯನಿಕಗಳಂತಹ ಹಲವಾರು ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಂಬಂಧವು ಆಳವಾಗಿ ಮುಂದುವರೆದಿದೆ. ಆರೋಗ್ಯ, ಔಷಧ, ಖನಿಜಗಳು, ವಾಯುಯಾನ ಮತ್ತು ಇತರ ಕ್ಷೇತ್ರಗಳಲ್ಲಿ ಭಾರತವು ಬ್ರೆಜಿಲ್‌ನೊಂದಿಗೆ ಸಹಕಾರವನ್ನು ವಿಸ್ತರಿಸುತ್ತಿದೆ ಎಂದು ತಿಳಿಸಿದರು. ವಿಜ್ಞಾನ ಮತ್ತು ತಂತ್ರಜ್ಞಾನ, ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ, ಎಐ ಮತ್ತು ಬಾಹ್ಯಾಕಾಶ ತಂತ್ರಜ್ಞಾನದಂತಹ ಕ್ಷೇತ್ರಗಳಲ್ಲಿ ಸಹಯೋಗದಲ್ಲಿ ಗಮನಾರ್ಹ ಬೆಳವಣಿಗೆ ಕಂಡುಬಂದಿದೆ ಎಂದು ಸಚಿವ ಪಿಯೂಷ್ ಗೋಯಲ್ ಹೇಳಿದರು.

<>><><*><><<>

ನವದೆಹಲಿಯಲ್ಲಿ ನಡೆದ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆ ನೀತಿ ನಿರೂಪಕರು, ಉದ್ಯಮ ನಾಯಕರು, ನಾವೀನ್ಯಕಾರರು ಮತ್ತು ನವೋದ್ಯಮಗಳಿಗೆ ವಿಚಾರಗಳನ್ನು ವಿನಿಮಯ ಮಾಡಿಕೊಳ್ಳಲು ಮತ್ತು ಎಐ-ಚಾಲಿತ ಪರಿಹಾರಗಳನ್ನು ಪ್ರದರ್ಶಿಸಲು ಒಂದು ಸಾಮಾನ್ಯ ವೇದಿಕೆಯನ್ನು ಒದಗಿಸಿತು. ಶೃಂಗಸಭೆಯಲ್ಲಿ ೫೦೦ ಕ್ಕೂ ಹೆಚ್ಚು ಎಐ ತಜ್ಞರು, ನೂರಕ್ಕೂ ಹೆಚ್ಚು ಸಂಸ್ಥಾಪಕರು ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ೧೫೦ ಶಿಕ್ಷಣ ತಜ್ಞರು ಮತ್ತು ಸಂಶೋಧಕರು ಹಾಗೂ ಸುಮಾರು ೪೦೦ ಮುಖ್ಯ ತಾಂತ್ರಿಕ ಅಧಿಕಾರಿಗಳು ಭಾಗವಹಿಸಿದ್ದರು. ಶೃಂಗಸಭೆಯಲ್ಲಿ ಐದು ಲಕ್ಷಕ್ಕೂ ಹೆಚ್ಚು ಸಂದರ್ಶಕರು ಭಾಗವಹಿಸಿದ್ದು, ಅಗಾಧ ಪ್ರತಿಕ್ರಿಯೆಯನ್ನು ದಾಖಲಿಸಿತು. ಆಕಾಶವಾಣಿಯೊಂದಿಗೆ ಮಾತನಾಡಿದ ಕೇಂದ್ರ ವಿದ್ಯುನ್ಮಾನ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯದ ಅಡಿಯಲ್ಲಿ ಪ್ರದರ್ಶಕರಾಗಿರುವ ಆಕಾಶ್, ಶೃಂಗಸಭೆಯು ಅಮೂಲ್ಯವಾದ ಕಲಿಕೆ ಮತ್ತು ನೆಟ್‌ವರ್ಕಿಂಗ್ ಅವಕಾಶಗಳನ್ನು ನೀಡಿತು. ಮುಂಬರುವ ವರ್ಷಗಳಲ್ಲಿ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನದಲ್ಲಿ ಎಐ ಅನ್ನು ಬಳಸಿಕೊಳ್ಳುವಲ್ಲಿ ಭಾರತವು ಅಪಾರ ಸಾಮರ್ಥ್ಯವನ್ನು ಹೊಂದಿದೆ ಎಂದು ಹೇಳಿದ್ದಾರೆ.

<>><><*><><<>

೨೦೨೬ರ ಭಾರತ ಏಐ ಇಂಪ್ಯಾಕ್ಟ್ ಶೃಂಗಸಭೆ, ಕೃತಕ ಬುದ್ಧಿಮತ್ತೆಯ ಪರಿಣಾಮದ ಕುರಿತಾದ ನವದೆಹಲಿ ಘೋಷಣೆಯನ್ನು ಅಂಗೀಕರಿಸಿದೆ. ಕೃತಕ ಬುದ್ಧಿಮತ್ತೆಯ ಕುರಿತ ಜಾಗತಿಕ ಸಹಕಾರದಲ್ಲಿ ಮಹತ್ವದ ಮೈಲಿಗಲ್ಲನ್ನು ಈ ಘೋಷಣೆ ಗುರುತಿಸುತ್ತದೆ. ಆರ್ಥಿಕ ಬೆಳವಣಿಗೆ ಮತ್ತು ಸಾಮಾಜಿಕ ಒಳಿತಿಗಾಗಿ ಕೃತಕ ಬುದ್ಧಿಮತ್ತೆಯನ್ನು ಬಳಸಿಕೊಳ್ಳುವ ಬಗ್ಗೆ ಜಾಗತಿಕವಾಗಿ ಒಮ್ಮತವನ್ನು ಪ್ರತಿಬಿಂಬಿಸುವ ಈ ಘೋಷಣೆಯನ್ನು ಒಟ್ಟು ೮೮ ದೇಶಗಳು ಮತ್ತು ಅಂತಾರಾಷ್ಟ್ರೀಯ ಸಂಸ್ಥೆಗಳು ಅನುಮೋದಿಸಿವೆ. ನಿನ್ನೆ ಮುಕ್ತಾಯಗೊಂಡ ಶೃಂಗಸಭೆಯು ಜಗತ್ತಿನ ವಿವಿಧ ಭಾಗಗಳಿಂದ ಹೆಚ್ಚಿನ ಭಾಗವಹಿಸುವಿಕೆಯನ್ನು ಆಕರ್ಷಿಸಿದೆ. "ಸರ್ವಜನ ಹಿತಾಯ, ಸರ್ವಜನ ಸುಖಾಯ" ಎಂಬ ತತ್ವದಿಂದ ಮಾರ್ಗದರ್ಶಿಸಲ್ಪಟ್ಟ ಈ ಘೋಷಣೆಯು ಕೃತಕ ಬುದ್ಧಿಮತ್ತೆಯ ಪ್ರಯೋಜನಗಳನ್ನು ಮಾನವೀಯತೆಯೊಂದಿಗೆ ಸಮಾನವಾಗಿ ಹಂಚಿಕೊಳ್ಳಬೇಕು ಎಂದು ಒತ್ತಿಹೇಳುತ್ತದೆ. ಜನತೆ, ಭೂಮಿ ಮತ್ತು ಪ್ರಗತಿಯೆಂಬ ೨೦೨೬ ರ ಭಾರತ ಎಐ ಇಂಪ್ಯಾಕ್ಟ್ ಶೃಂಗಸಭೆಯ ಮೂರು ಸೂತ್ರಗಳಿಂದ ಪ್ರೇರಿತವಾದ ಆಕಾಂಕ್ಷೆಗಳನ್ನು ಕಟ್ಟುನಿಟ್ಟಾದ ಕ್ರಮಗಳಾಗಿ ಕಾರ್ಯರೂಪಕ್ಕೆ ತರಲು ನಿರಂತರ ಸಹಕಾರಕ್ಕಾಗಿ ತಮ್ಮ ಬದ್ಧತೆಯನ್ನು ಈ ದೇಶಗಳು ವ್ಯಕ್ತಪಡಿಸಿವೆ.

<>><><*><><<>

ಅಮೆರಿಕದ ಸುಪ್ರೀಂ ಕೋರ್ಟ್‌ನಲ್ಲಿ ದೊಡ್ಡ ಹಿನ್ನಡೆಯ ನಂತರ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಜಾಗತಿಕ ಸುಂಕಗಳನ್ನು ಶೇಕಡಾ ೧೦ ರಿಂದ ೧೫ ಕ್ಕೆ ಏರಿಕೆ ಮಾಡಿದ್ದಾರೆ. ಅಮೆರಿಕದ ಸುಪ್ರೀಂ ಕೋರ್ಟ್ ತನ್ನ ತೀರ್ಪಿನಲ್ಲಿ, ಅಂತಾರಾಷ್ಟ್ರೀಯ ತುರ್ತು ಆರ್ಥಿಕ ಅಧಿಕಾರ ಕಾಯ್ದೆಯು ಅಧ್ಯಕ್ಷರಿಗೆ ಆಮದುಗಳ ಮೇಲೆ ವಿಶಾಲವಾದ, ಎಲ್ಲಾ ರೀತಿಯ ಸುಂಕಗಳನ್ನು ಪರಿಚಯಿಸುವ ಅಧಿಕಾರವನ್ನು ನೀಡುವುದಿಲ್ಲ ಎಂದು ಹೇಳಿದೆ.  ತೀರ್ಪಿನ ಕೆಲವೇ ಗಂಟೆಗಳಲ್ಲಿ, ಟ್ರಂಪ್ ವರದಿಗಾರರ ಮುಂದೆ ಹಾಜರಾದರು ಮತ್ತು ಹೊಸ ಸುತ್ತಿನ ಸುಂಕಗಳನ್ನು ಘೋಷಿಸಿದರು. ಅಸ್ತಿತ್ವದಲ್ಲಿರುವ ಸುಂಕಗಳ ಜೊತೆಗೆ ಹೊಸದಾಗಿ ಶೇಕಡಾ ೧೦ ರಷ್ಟು ಜಾಗತಿಕ ಸುಂಕವನ್ನು ಟ್ರಂಪ್ ಘೋಷಿಸಿದರು. ಪ್ರಮುಖ ರಾಷ್ಟ್ರೀಯ ಭದ್ರತೆ ಮತ್ತು ವ್ಯಾಪಾರ-ಸಂಬಂಧಿತ ಸುಂಕಗಳು ಯಾವುದೇ ಅಡೆ-ತಡೆಯಿಲ್ಲದೆ ಮುಂದುವರಿಯುತ್ತವೆ ಎಂದು ಅವರು ತಿಳಿಸಿದರು.

<>><><*><><<>

ಕೊಲೊಂಬೋದ ಆರ್.ಪ್ರೇಮದಾಸ ಕ್ರೀಡಾಂಗಣದಲ್ಲಿ ನಿನ್ನೆ ನಡೆಯಬೇಕಿದ್ದ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ ಸೂಪರ್ ೮ರ ಹಂತದ ನ್ಯೂಜಿಲೆಂಡ್ ಹಾಗೂ ಪಾಕಿಸ್ತಾನ ತಂಡಗಳ ನಡುವಿನ ಪಂದ್ಯವು ಮಳೆಯ ಕಾರಣ ರದ್ದುಗೊಂಡಿತು. ಈ ಹಿನ್ನೆಲೆಯಲ್ಲಿ ಉಭಯ ತಂಡಗಳಿಗೆ ತಲಾ ಒಂದು ಅಂಕಗಳನ್ನು ನೀಡಲಾಗಿದೆ.

<>><><*><><<>

ಆಸ್ಟ್ರೇಲಿಯಾದ ಅಡಿಲೇಡ್‌ನ ಓವಲ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಮೂರು ಪಂದ್ಯಗಳ ಮಹಿಳಾ ಟಿ-೨೦ ಸರಣಿಯ ಕೊನೆಯ ಪಂದ್ಯದಲ್ಲಿ ಭಾರತ, ಆಸ್ಟ್ರೇಲಿಯಾ ತಂಡವನ್ನು ೧೭ ರನ್ ಗಳಿಂದ ಮಣಿಸಿದೆ.  ಈ ಮೂಲಕ ಸರಣಿಯನ್ನು ೨-೧ ಅಂತರದಲ್ಲಿ ತನ್ನದಾಗಿಸಿಕೊಂಡಿದೆ. ಮೊದಲು ಬ್ಯಾಟಿಂಗ್ ಮಾಡಿದ ಭಾರತ, ಸ್ಮೃತಿಮಂಧಾನ ಅವರ ೮೨ ರನ್‌ಗಳ ಬಲದಿಂದ ನಿಗದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೭೬ ರನ್ ಕಲೆಹಾಕಿತು. ೧೭೭ ರನ್‌ಗಳ ಗುರಿ ಬೆನ್ನತ್ತಿದ ಆಸ್ಟ್ರೇಲಿಯಾ ನಿಗದಿತ ೨೦ ಓವರ್‌ಗಳಲ್ಲಿ ೯ ವಿಕೆಟ್ ಕಳೆದುಕೊಂಡು ೧೫೯ ರನ್ ಗಳಿಸಲಷ್ಟೇ ಶಕ್ತವಾಯಿತು.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>